# ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : **570**

ಸದಸ್ಯರ ಹೆಸರು : ಶ್ರೀ ಕೆ.ಟಿ ಶ್ರೀಕಂಠೇಗೌಡ (ಪದವೀಧರರ ಕ್ಷೇತ್ರ)

ಉತ್ತರಿಸಬೇಕಾದ ದಿನಾಂಕ : 24-09-2020

ಉತ್ತರಿಸುವ ಸಚಿವರು : ಮುಖ್ಯಮಂತ್ರಿಗಳು

***

| | ಪ್ರಶ್ನೆ | ಉತ್ತರ |
|---|---|---|
| ಅ) | ರಾಜ್ಯದಲ್ಲಿ ರೈತರ ಕೃಷಿ ಪಂಪ್ ಸೆಟ್ ಗಳಿಗೆ ವಿದ್ಯುತ್ ಸಂಪರ್ಕವನ್ನು ಒದಗಿಸಲು ಸೂಕ್ತವಾದಂತಹ ಸಮಯವನ್ನು ಸರ್ಕಾರ ನಿಗದಿ ಮಾಡಿದೆಯೇ; | ರಾಜ್ಯದ ವಿದ್ಯುತ್ ಸರಬರಾಜು ಕಂಪನಿಗಳ ವ್ಯಾಪ್ತಿಯಲ್ಲಿ ರೈತರ ನೀರಾವರಿ ಪಂಪ್ ಸೆಟ್‌ಗಳಿಗೆ ವಿದ್ಯುತ್ ಸಂಪರ್ಕ ಕಲ್ಪಿಸುವ ಕುರಿತು ಸರ್ಕಾರಿ ಸುತ್ತೋಲೆ ಸಂಖ್ಯೆ ಇಎನ್/41/ವಿಎಸ್‌ಸಿ/2014/ಪಿ1 ದಿನಾಂಕ 14-07-2014 ಮತ್ತು 23-7-2014 ರಂದು ಆದೇಶ ಹೊರಡಿಸಲಾಗಿದ್ದು, ಆ ಪ್ರಕಾರ ಹಣ ಪಾವತಿಸಿರುವ ಅರ್ಜಿದಾರರ ಜೇಷ್ಠತಾಪಟ್ಟಿ ತಯಾರಿಸಿ, ರೈತರ ನೀರಾವರಿ ಪಂಪ್‌ಸೆಟ್‌ಗಳಿಗೆ ವಿದ್ಯುತ್ ಸಂಪರ್ಕವನ್ನು ಕಲ್ಪಿಸಲಾಗುತ್ತಿದೆ. |
| ಆ) | ಪ್ರಸ್ತುತ ಕೃಷಿ ಚಟುವಟಿಕೆಗೆ ಎಷ್ಟು ಸಮಯ 3 ಫೇಸ್ ವಿದ್ಯುತ್ ನೀಡಲಾಗುತ್ತಿದೆ; | ಪ್ರಸ್ತುತ ರಾಜ್ಯದ ರೈತರ ಕೃಷಿ ಪಂಪ್‌ಸೆಟ್‌ಗಳಿಗೆ ದಿನವಹಿ 7 ಗಂಟೆಗಳ ಕಾಲ 3 ಫೇಸ್ ವಿದ್ಯುತ್ತನ್ನು ಸರಬರಾಜು ಮಾಡಲಾಗುತ್ತಿದೆ. |
| ಇ) | ಇನ್ನೂ ಹೆಚ್ಚಿನ ಅವಧಿ 3 ಫೇಸ್ ವಿದ್ಯುತ್ ನೀಡಿ ರೈತರಿಗೆ ಅನುಕೂಲ ಮಾಡಿಕೊಡಲು ಸರ್ಕಾರ ಆಲೋಚಿಸಿದೆಯೇ; | ಪ್ರಸ್ತುತ ರಾಜ್ಯದ ರೈತರ ಕೃಷಿ ಪಂಪ್‌ಸೆಟ್‌ಗಳಿಗೆ ದಿನವಹಿ 7 ಗಂಟೆಗಳ ಕಾಲ 3 ಫೇಸ್ ವಿದ್ಯುತ್ತನ್ನು ಉಚಿತವಾಗಿ ನೀಡುತ್ತಿದ್ದು, ಕೆಇಆರ್‌ಸಿ ರವರು ನಿಗದಿಪಡಿಸುವ ದರದಂತೆ ಸರ್ಕಾರದಿಂದ ವಿದ್ಯುತ್ ಸರಬರಾಜು ಕಂಪನಿಗಳಿಗೆ ಸಹಾಯಧನವನ್ನು ಬಿಡುಗಡೆಗೊಳಿಸಲಾಗುತ್ತಿದೆ. ಹಾಲಿ ನೀಡಲಾಗುತ್ತಿರುವ 7 ಗಂಟೆಗಳ ಉಚಿತ ವಿದ್ಯುತ್ ಪೂರೈಕೆಯ ಅವಧಿಯನ್ನು ಹೆಚ್ಚಿಸಬೇಕಾದಲ್ಲಿ, |
| ಈ) | ರೈತರಿಗೆ ಟ್ರಾನ್ಸ್ ಫಾರ್ಮರ್ (ಟಿ.ಸಿ.) ಗಳನ್ನು ಸಮರ್ಪಕವಾಗಿ ಒದಗಿಸುವ ನಿಟ್ಟಿನಲ್ಲಿ ಅಧಿಕಾರಿಗಳಿಂದ ವಿಳಂಬ ಧೋರಣೆ ಆಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ರೈತರ ಕೃಷಿ ಪಂಪ್‌ಸೆಟ್‌ಗಳ ಸಕ್ರಮೀಕರಣ ಯೋಜನೆ, ಶೀಘ್ರ ಸಂಪರ್ಕ ಯೋಜನೆ, ಗಂಗಾಕಲ್ಯಾಣ ಯೋಜನೆ, ವಿಸ್ತರಣೆ ಮತ್ತು ಸುಧಾರಣೆ ಕಾಮಗಾರಿಗಳಿಗೆ ಅವಶ್ಯಕತೆ ಇರುವಲ್ಲಿ ಪರಿವರ್ತಕಗಳನ್ನು ಕೆ.ಟಿ.ಪಿ.ಪಿ. ಕಾಯ್ದೆಯಡಿ ವಿನಾಯಿತಿ ಪಡೆದಿರುವ ಸಂಸ್ಥೆಗಳಾದ ಮೆ: ಕವಿಕಾ, ಬೆಂಗಳೂರು, ಮೆ: ಎನ್.ಜಿ.ಇ.ಎಫ್, ಹುಬ್ಬಳ್ಳಿ ರವರುಗಳಿಂದ್ಲ ಖರೀದಿಸಿ, ಯಾವುದೇ ವಿಳಂಬ ಧೋರಣೆ ಅನುಸರಿಸದೆ ವಿದ್ಯುತ್ ಪರಿವರ್ತಕಗಳನ್ನು ಅಳವಡಿಸಿ, ವಿದ್ಯುತ್ ಸಂಪರ್ಕವನ್ನು ಕಲ್ಪಿಸಲಾಗುತ್ತಿದೆ. |
| ಉ) | ಬಂದಿದ್ದಲ್ಲಿ, ಶೀಘ್ರವಾಗಿ ರೈತರಿಗೆ ಟಿ.ಸಿ. ಗಳನ್ನು ವಿತರಿಸಲು ಸರ್ಕಾರ ಕೈಗೊಂಡ ಕ್ರಮಗಳೇನು? (ವಿವರ ನೀಡುವುದು) | ರೈತರ ಕೃಷಿ ಪಂಪ್‌ಸೆಟ್‌ಗಳ ಪರಿವರ್ತಕಗಳು ವಿಫಲವಾದಲ್ಲಿ 72 ಗಂಟೆಯೊಳಗೆ ಜೇಷ್ಠತೆ ಮತ್ತು ಲಭ್ಯತೆ ಮೇರೆಗೆ ಬದಲಾಯಿಸಲಾಗುತ್ತಿದೆ.<br>ರಾಜ್ಯದಲ್ಲಿ ಒಟ್ಟು 156 ಸಂಖ್ಯೆಯ ಪರಿವರ್ತಕ ದುರಸ್ಥಿ ಕೇಂದ್ರಗಳು ಕಾರ್ಯನಿರ್ವಹಿಸುತ್ತಿದ್ದು, ವಿಫಲವಾದ ಪರಿವರ್ತಕಗಳನ್ನು ದುರಸ್ಥಿಗೊಳಿಸಿ, ಬದಲಾಯಿಸಲಾಗುತ್ತಿದೆ ಹಾಗೂ ತಾಲ್ಲೂಕುವಾರು/ವಿಭಾಗವಾರು 191 ಸಂಖ್ಯೆಯ ಪರಿವರ್ತಕಗಳ ಬ್ಯಾಂಕ್‌ನ್ನು ಸ್ಥಾಪಿಸಲಾಗಿದ್ದು, ಅವುಗಳಲ್ಲಿರುವ ದಾಸ್ತಾನಿನ ಮುಖಾಂತರ ರೈತರ ಕೃಷಿ ಪಂಪ್‌ಸೆಟ್‌ಗಳ ವಿಫಲವಾದ ಪರಿವರ್ತಕಗಳನ್ನು ಬದಲಾಯಿಸಲಾಗುತ್ತಿದ್ದು, ಇದೊಂದು ನಿರಂತರ ಪ್ರಕ್ರಿಯೆಯಾಗಿರುತ್ತದೆ. |

ಸಂಖ್ಯೆ: ಎನರ್ಜಿ 192 ಇಬಿಎಸ್ 2020

ಬಿ.ಎಸ್. ಯಡಿಯೂರಪ್ಪ

(ಬಿ.ಎಸ್.ಯಡಿಯೂರಪ್ಪ)

ಮುಖ್ಯಮಂತ್ರಿ